(3)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ

**ಪ್ರಶ್ನೆ:-**

ರಾಜ್ಯದಲ್ಲಿ ಸುಮಾರು 1200 ವರ್ಷಗಳ ಇತಿಹಾಸ ಹೊಂದಿ ಜೀವಿಸುತ್ತಿರುವ ಪ್ರಾಚೀನ ದ್ರಾವಿಡ ಮೂಲಭಾಷೆಗಳ ಉಪಭಾಷೆಯಲ್ಲೊಂದಾದ **"ಬ್ಯಾರಿ"** ಭಾಷೆಯಾಗಿದ್ದು, ರಾಜ್ಯಾದ್ಯಂತ 25 ಲಕ್ಷಕ್ಕಿಂತ ಅಧಿಕ ಜನಸಂಖ್ಯೆ ಹೊಂದಿರುತ್ತದೆ. ಈ ಭಾಷೆಯ ಜನರು ಜೀವನ ನಡೆಸಿಕೊಂಡು ಬಂದಿರುತ್ತಾರೆ. ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಈ ಭಾಷೆಯ ಜನಸಂಖ್ಯೆ ಇರುತ್ತಾರೆ. ಬ್ಯಾರಿ ನಿಗಮವನ್ನು ಪ್ರಾರಂಭಿಸಬೇಕೆಂದು ಈ ಸಮುದಾಯದವರ ಅನೇಕ ವರ್ಷಗಳ ಬೇಡಿಕೆಯಾಗಿರುವುದರಿಂದ ಸರ್ಕಾರವು **"ಬ್ಯಾರಿ ಅಭಿವೃದ್ಧಿ ನಿಗಮ"**ವನ್ನು ಪ್ರಾರಂಭಿಸಲು ಕ್ರಮಕೈಗೊಳ್ಳುವುದರ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಡಿಯಲ್ಲಿ ಬರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಜನಾಂಗದ ಅಭಿವೃದ್ಧಿಗಾಗಿ ವಿವಿಧ ಸಾಲ ಮತ್ತು ಸಹಾಯಧನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮುಸ್ಲಿಂ ಸಮುದಾಯದಲ್ಲಿ ವಿವಿಧ ಪಂಗಡಗಳಿದ್ದು, ಅದರಲ್ಲಿ ಬ್ಯಾರಿ ಜನಾಂಗವು ಒಂದಾಗಿದ್ದು, ಈ ಜನಾಂಗವು ಹೆಚ್ಚಾಗಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು ಮತ್ತು ಬೆಂಗಳೂರು ನಗರ ಪ್ರದೇಶಗಳಲ್ಲಿ ವಾಸವಾಗಿರುತ್ತಾರೆ. ಈ ಪಂಗಡವು ಮುಸ್ಲಿಂ ಸಮುದಾಯದ ಪಂಗಡಗಳಲ್ಲಿ ಒಂದಾಗಿರುವುದರಿಂದ, ಇವರ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಗಳನ್ನು ನಿಯಮಾನುಸಾರ ನೀಡಲಾಗುತ್ತಿದೆ.

ಮುಂದುವರೆದು, ಬ್ಯಾರಿ ಅಭಿವೃದ್ಧಿ ನಿಗಮವನ್ನು ಪ್ರಾರಂಭಿಸುವ ಯಾವುದೇ ಪ್ರಸ್ತಾವನೆಗಳು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ.

**ಕಡತ ಸಂಖ್ಯೆ:MWD 120 LMQ 2025**

B. Zameer

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು